A-PDF Merger DEMO : Purchase from www.A-PDF.com to remove the watermark

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರ ನಗರದಲ್ಲಿ ಡಾ:ಬಾಬು ಜಗಜೀವನ ರಾಂ ಭವನ ನಿರ್ಮಿಸಲು ರೂ.100.00 ಲಕ್ಷಗಳನ್ನು ಮಂಜೂರು ಮಾಡುವ ಬಗ್ಗೆ

ಓದಲಾಗಿದೆ: ಸರ್ಕಾರದ ಆದೇಶ ಸಂಖ್ಯೆ:ಸಕಇ 62 ಎಸ್‌ಎಲ್‌ಪಿ 2013 ದಿನಾಂಕ:31-08-2013

******

**ಪ್ರಸ್ತಾವನೆ:-**

ಮೇಲೆ (1)ರಲ್ಲಿ ಓದಲಾದ ದಿನಾಂಕ:31-08-2013ರ ಸರ್ಕಾರದ ಆದೇಶದಲ್ಲಿ ಪರಿಶಿಷ್ಟ ಜಾತಿ ಉಪಯೋಜನೆ ಕ್ರೋಢೀಕೃತ ಕಾರ್ಯಕ್ರಮಗಳಲ್ಲಿ ಗ್ರಾಮ/ಹೋಬಳಿ/ತಾಲ್ಲೂಕು/ಜಿಲ್ಲಾ ಕೇಂದ್ರಗಳಲ್ಲಿ ನಿರ್ಮಿಸುವ ಸಮುದಾಯ ಭವನಗಳು/ಡಾ:ಬಿ.ಆರ್.ಅಂಬೇಡ್ಕರ್ ಭವನಗಳು/ಡಾ:ಬಾಬು ಜಗಜೀವನ ರಾಂ ಭವನಗಳಿಗೆ ರೂ.88.00 ಕೋಟಿಗಳನ್ನು ಪರಿಶಿಷ್ಟ ಜಾತಿ ಉಪಯೋಜನೆ ಕ್ರೋಢೀಕೃತ ಅನುದಾನವನ್ನು ಹಂಚಿಕೆ ಮಾಡಿ ಆದೇಶಿಸಲಾಗಿದೆ.

2013-14ನೇ ಸಾಲಿನಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೊಡ್ಡಬಳ್ಳಾಪುರ ನಗರದಲ್ಲಿ ಡಾ:ಬಾಬು ಜಗಜೀವನ ರಾಂ ಭವನ ನಿರ್ಮಿಸಲು ರೂ.100.00 ಲಕ್ಷಗಳನ್ನು ಮಂಜೂರು ಮಾಡಲು ಸರ್ಕಾರವು ನಿರ್ಧರಿಸಿದೆ.

ಆದ್ದರಿಂದ ಈ ಕೆಳಕಂಡ ಆದೇಶ.

**ಸರ್ಕಾರಿ ಆದೇಶ ಸಂಖ್ಯೆ: ಸಕಇ 82 ಪಕವಿ 2014, ಬೆಂಗಳೂರು ದಿನಾಂಕ:28-02-2014**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, 2013-14ನೇ ಸಾಲಿನಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆ ದೊಡ್ಡಬಳ್ಳಾಪುರ ನಗರದಲ್ಲಿ ಡಾ:ಬಾಬು ಜಗಜೀವನ ರಾಂ ಭವನ ನಿರ್ಮಿಸಲು ರೂ.100.00 ಲಕ್ಷ (ರೂ.ಒಂದು ನೂರು ಲಕ್ಷಗಳು ಮಾತ್ರ)ಗಳನ್ನು ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ತಾತ್ವಿಕ ಮಂಜೂರಾತಿ ನೀಡಿ ಆದೇಶಿಸಲಾಗಿದೆ.

**ಷರತ್ತುಗಳು:**

1) ಸರ್ಕಾರಿ ಆದೇಶ ಸಂಖ್ಯೆ:ಸಕಇ 180 ಪಕವಿ 2011 ದಿನಾಂಕ:28-09-2011ರ ಅನುಬಂಧದಲ್ಲಿ ಸೂಚಿಸಿರುವ ಮಾರ್ಗಸೂಚಿಗಳು ಅನ್ವಯವಾಗುತ್ತದೆ. ಅಂತೆಯೇ ಕಾಮಗಾರಿಯನ್ನು ಕೈಗೊಳ್ಳತಕ್ಕದ್ದು.
2) ಪ್ರಸ್ತಾಪಿಸಿದ ಭವನದ ವಿವರವಾದ ಅಂದಾಜುಪಟ್ಟಿ ತಯಾರಿಸಿ ಅನುಮೋದನೆಗಾಗಿ ಸರ್ಕಾರಕ್ಕೆ ಸಲ್ಲಿಸುವುದು.
3) ಭವನದ ಅಂದಾಜು ಪಟ್ಟಿಗೆ ತಾಂತ್ರಿಕ ಅನುಮೋದನೆಯನ್ನು ಪಡೆಯತಕ್ಕದ್ದು.
4) ಸದರಿ ಭವನ ನಿರ್ಮಾಣದ ಉಸ್ತುವಾರಿಯನ್ನು ಜಿಲ್ಲಾಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರಿಗೆ ವಹಿಸಿದೆ.

.......2)

5) ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ಹಾಗೂ ಅದರಡಿ ರೂಪಿಸಿರುವ ನಿಯಮಗಳಲ್ಲಿ ನಿಗದಿಪಡಿಸಿರುವ ಕಾರ್ಯವಿಧಾನ (Procedure) ಪಾಲಿಸತಕ್ಕದ್ದು.

6) ಭವನದ ನಿರ್ಮಾಣ ವೆಚ್ಚವು ಉಲ್ಲೇಖಿತ ಅಂದಾಜು ವೆಚ್ಚ ಮೀರಿದಲ್ಲಿ ಅಂತಹ ಮೊತ್ತವನ್ನು ಸ್ಥಳೀಯ ಮೂಲಗಳಿಂದ ಭರಿಸತಕ್ಕದ್ದು. ಈ ಭವನದ ನಿರ್ಮಾಣಕ್ಕೆ ಸಂಬಂಧಿಸಿದಂತೆ ಹೆಚ್ಚುವರಿ ಅನುದಾನಕ್ಕಾಗಿ ಪ್ರಸ್ತಾವನೆ ಸಲ್ಲಿಸತಕ್ಕದ್ದಲ್ಲ.

7) ಕಾಮಗಾರಿಯ ಬಗ್ಗೆ ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರು ತಪಾಸಣೆ ನಡೆಸಿ ಪ್ರಗತಿ ಹಂತದ ವರದಿಯನ್ನು ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ಇವರಿಗೆ ಸಲ್ಲಿಸತಕ್ಕದ್ದು.

8) ಈ ಉದ್ದೇಶಕ್ಕಾಗಿ ಬಿಡುಗಡೆಯಾದ ಅನುದಾನವನ್ನು ಉದ್ದೇಶಿತ ಕಾರ್ಯಕ್ರಮಕ್ಕೆ ಪೂರ್ಣವಾಗಿ ಬಳಕೆ ಮಾಡಿ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

ಈ ಸಂಬಂಧದ ವೆಚ್ಚವನ್ನು ಪರಿಶಿಷ್ಟ ಜಾತಿ ಉಪಯೋಜನೆ ಕ್ರೋಢೀಕೃತ ಅನುದಾನ ಲೆಕ್ಕ ಶೀರ್ಷಿಕೆ 2225-01-102-0-08 (ಯೋಜನೆ) ಅಡಿ ಒದಗಿಸಲಾದ ಅನುದಾನದಲ್ಲಿ ಭರಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್.ನರಸಿಂಹ ಮೂರ್ತಿ)
ಸರ್ಕಾರದ ಅಧೀನ ಕಾರ್ಯದರ್ಶಿ-1,
ಸಮಾಜ ಕಲ್ಯಾಣ ಇಲಾಖೆ.

**ಗೆ:**

1) ಮಹಾಲೇಖಪಾಲರು, (ಲೆಕ್ಕ ಪತ್ರ/ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು
2) ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು
3) ಜಿಲ್ಲಾಧಿಕಾರಿಗಳು, ಬೆಂಗಳೂರು (ಗ್ರಾಮಾಂತರ) ಜಿಲ್ಲೆ
4) ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ, ಬೆಂಗಳೂರು (ಗ್ರಾಮಾಂತರ)
5) ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಕೆ.ಆರ್.ವೃತ್ತ, ಬೆಂಗಳೂರು
6) ಉಪ ನಿರ್ದೇಶಕರು, ಗಣಕ ಜಾಲ ನಿರ್ವಹಣಾ ಕೇಂದ್ರ, ಖಜಾನೆ ಇಲಾಖೆ, ಖನಿಜ ಭವನ, ಬೆಂಗಳೂರು
7) ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು
8) ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
9) ಸರ್ಕಾರದ ಅಧೀನ ಕಾರ್ಯದರ್ಶಿ (ವೆಚ್ಚ-3 & 9), ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
10) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು